ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೊಂದನೆಯ ಅಧಿವೇಶನ

ಗುರುವಾರ, ದಿನಾಂಕ : 24 ನೇ ಸೆಪ್ಟೆಂಬರ್, 2020

ಮಾಹಿತಿ ತಂತ್ರಜ್ಞಾನ ಕಾಯ್ದೆಯ ಅನ್ವಯ ದಾಖಲು ಮಾಡಿದ ಪ್ರಕರಣಗಳ ಕುರಿತು

ಶ್ರೀ ಎನ್. ರವಿಕುಮಾರ್(ವಿಧಾನ ಸಭೆಯಿಂದ ಚುನಾಯಿತರಾದವರು ) -

531 (650) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ -

(ಅ) ಕಳೆದ 5 ವರ್ಷಗಳಲ್ಲಿ ಮಾಹಿತಿ ತಂತ್ರಜ್ಞಾನ ಕಾಯ್ದೆಯ ಅಡಿಯಲ್ಲಿ ದಾಖಲು ಮಾಡಿರುವ ಪ್ರಕರಣಗಳ ಸಂಖ್ಯೆ ಎಷ್ಟು;

(ಆ) ಮಾಹಿತಿ ತಂತ್ರಜ್ಞಾನ ಕಾಯ್ದೆ 68ಎ ಯ ಅನ್ವಯ ಎಷ್ಟು ಪಕ್ರರಣಗಳನ್ನು ದಾಖಲಿಸಲಾಗಿದೆ; ಪ್ರಸ್ತುತ ಈ ಪ್ರಕರಣಗಳು ಯಾವ ಹಂತದಲ್ಲಿವೆ; ದಿನಾಂಕ: 24.03-2015ರ ಬಳಿಕ ಈ ಕಾಯ್ದೆಯ ಅನ್ವಯ ದಾಖಲಾದ ಪ್ರಕರಣಗಳ ಸ್ಥಿತಿಗತಿಗಳೇನು;

(ಇ) ದಿನಾಂಕ: 24.03.2015ರ ಬಳಿಕ ಮಾಹಿತಿ ತಂತ್ರಜ್ಞಾನ ಕಾಯ್ದೆಯ ಅನ್ವಯ ಎಷ್ಟು ಪ್ರಕರಣಗಳನ್ನು ದಾಖಲಿಸಲಾಗಿದೆ; ಯಾವ ಸೆಕ್ಷನ್‌ಗಳ ಅಡಿಯಲ್ಲಿ ದಾಖಲಿಸಲಾಗಿದೆ; (ಪ್ರಕರಣವಾರು, ಜಿಲ್ಲಾವಾರು ಮಾಹಿತಿ ನೀಡಿವುದು)

(ಇ) ಇತ್ತೀಚಿನ ದಿನಗಳಲ್ಲಿ ಸಾಮಾಜಿಕ ಜಾಲತಾಣಗಳಲ್ಲಿ ಕೋಮು ಪ್ರಚೋದನೆ/ಎರಡು ಸಮುದಾಯಗಳ ನಡುವೆ ಘರ್ಷಣೆಯನ್ನು ಪ್ರಚೋದಿಸುವ ಲೇಖನ ಬರೆದಿರುವ ಕಾರಣಕ್ಕಾಗಿ ಎಷ್ಟು ಪ್ರಕರಣಗಳನ್ನು ಕಳೆದ 6 ತಿಂಗಳಲ್ಲಿ ದಾಖಲಿಸಲಾಗಿದೆ; ಈ ಪ್ರಕರಣಗಳಲ್ಲಿ ಯಾವ ಯಾವ ಸೆಕ್ಷನ್ ಯಾರ ಯಾರ ವಿರುದ್ಧ ಪ್ರಕರಣ ದಾಖಲಾಗಿದೆ; ಪ್ರಸ್ತುತ ಈ ಪ್ರಕರÀಣಗಳು ಯಾವ ಹಂತದಲ್ಲಿವೆ? (ವಿವರ ನೀಡುವುದು)